# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 68 (757) |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 22-07-2024 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>2017-18 ನೇ ಸಾಲಿನಲ್ಲಿ ಸಿಂಧನೂರಿಗೆ ಮಂಜೂರಾತಿ ಆಗಿದ್ದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜನ್ನು ಕಾಗವಾಡ ಕ್ಕೆ ಸ್ಥಳಾಂತರಿಸಲಾಗಿರುವುದು ನಿಜವೇ; ಹಾಗಿದ್ದಲ್ಲಿ ಯಾವ ಕಾರಣಕ್ಕಾಗಿ ಸ್ಥಳಾಂತರಿಸಲಾಗಿದೆ; ಸಿಂಧನೂರಿಗೆ ಹೊಸ ಪಾಲಿಟೆಕ್ನಿಕ್ ಕಾಲೇಜು ಮಂಜೂರು ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; (ವಿವರ ನೀಡುವುದು)</td><td>ಹೌದು<br><br>2017-18ನೇ ಸಾಲಿನಲ್ಲಿ ಸಿಂಧನೂರಿಗೆ ಮಂಜೂರಾತಿ ಆಗಿದ್ದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜನ್ನು ಪ್ರಾರಂಭಿಸಲು ಜಮೀನು ಲಭ್ಯವಿಲ್ಲದಿರುವುದರಿಂದ ಕಟ್ಟಡ ನಿರ್ಮಾಣ ಸಂಬಂಧ ಆಡಳಿತಾತ್ಮಕ ಅನುಮೋದನೆ ದೊರಯದ ಕಾರಣ ಸದರಿ ಸರ್ಕಾರಿ ಪಾಲಿಟೆಕ್ನಿಕ್ ಅನ್ನು ಕಾಗವಾಡಕ್ಕೆ ಸರ್ಕಾರಿ ಆದೇಶ ಸಂಖ್ಯೆ: ಇಡಿ 108 ಹೆಚ್ ಪಿಟಿ 2022, ದಿನಾಂಕ: 27-01-2023ರಲ್ಲಿ ಸ್ಥಳಾಂತರಿಸಲಾಗಿದೆ.<br><br>ಸಿಂಧನೂರು ಸುತ್ತಮುತ್ತ ಇರುವ ಸರ್ಕಾರಿ ಪಾಲಿಟೆಕ್ನಿಕ್ ಗಳ ವಿವರ ಕೆಳಕಂಡಂತಿದೆ:<br><br><table><tr><th>ಕ್ರ ಸಂ</th><th>ಪಾಲಿಟೆಕ್ನಿಕ್ ಹೆಸರು</th><th>ಅಂತರ (ಕಿ.ಮೀ.ಗಳಲ್ಲಿ)</th></tr><tr><td>1</td><td>ಸರ್ಕಾರಿ ಪಾಲಿಟೆಕ್ನಿಕ್, ಮಸ್ಕಿ</td><td>25</td></tr><tr><td>2</td><td>ಸರ್ಕಾರಿ ಪಾಲಿಟೆಕ್ನಿಕ್, ಲಿಂಗಸಗೂರು</td><td>25</td></tr><tr><td>3</td><td>ಸರ್ಕಾರಿ ಪಾಲಿಟೆಕ್ನಿಕ್, ಕಾರಟಗಿ</td><td>22</td></tr></table><br>ಮೇಲ್ಕಂಡ ಪಾಲಿಟೆಕ್ನಿಕ್‌ಗಳಲ್ಲಿ ಸಿಂಧನೂರಿನ ವಿದ್ಯಾರ್ಥಿಗಳು ವ್ಯಾಸಂಗ ಮಾಡಬಹುದಾಗಿದೆ.</td></tr>
</table>

| | | |
|---|---|---|
| (ಆ) | ಕಲ್ಯಾಣ ಕರ್ನಾಟಕ ವಿಭಾಗದಲ್ಲಿಯೇ ಅತಿ ಹೆಚ್ಚು ಪ್ರೌಢಶಾಲೆಗಳನ್ನು ಹೊಂದಿರುವ ಸಿಂಧನೂರು ತಾಲ್ಲೂಕಿನಲ್ಲಿ ಸರ್ಕಾರಿ ಪ್ರೌಢಶಾಲೆಗಳು 50, ಅನುದಾನಿತ ಪ್ರೌಡಶಾಲೆಗಳು 11 ಹಾಗೂ ಅನುದಾನರಹಿತ ಪ್ರೌಢಶಾಲೆಗಳು 39 ಇದ್ದು, ಈ ಪ್ರೌಢಶಾಲೆಗಳಿಂದ ತೇರ್ಗಡೆಯಾಗುವ ವಿದ್ಯಾರ್ಥಿಗಳು ಡಿಪ್ಲೋಮ ಕೋರ್ಸ್‌ಗೆ ವ್ಯಾಸಂಗ ಮಾಡಲು ಬೇರೆ ಜಿಲ್ಲೆಗಳಿಗೆ ಹೋಗುತ್ತಿರುವುದರಿಂದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಆದಷ್ಟು ತುರ್ತಾಗಿ ಸಿಂದನೂರಿಗೆ ಹೊಸ ಪಾಲಿಟೆಕ್ನಿಕ್ ಕಾಲೇಜು ಮಂಜೂರು ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ? | ಸರ್ಕಾರದ ಆದೇಶ ಸಂಖ್ಯೆ: ಇಡಿ 01 ಹೆಚ್‌ಪಿಟಿ 2024, ದಿನಾಂಕ: 11.07/2024ರಲ್ಲಿ ರಾಜ್ಯದಲ್ಲಿ ನೂತನ ಸರ್ಕಾರಿ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು ಪರಿಶೀಲಿಸಿ ವರದಿ ನೀಡುವ ಬಗ್ಗೆ ಅಧಿಕಾರಿಗಳ ಸಮಿತಿಯನ್ನು ರಚಿಸಿ ಆದೇಶಿಸಿದೆ. ಸಮಿತಿಯ ವರದಿಯನುಸಾರ ಸರ್ಕಾರಿ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |

ಕಡತ ಸಂಖ್ಯೆ: ಇಡಿ 68 ಹೆಚ್‌ಪಿಟಿ 2024

(ಡಾ|| ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು
ಡಾ.ಎಂ.ಸಿ ಸುಧಾಕರ್ ಎಂ.ಬಿ.ಎಸ್
ಉನ್ನತ ಶಿಕ್ಷಣ ಸಚಿವರು